ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ **B+** (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 jsscwk@gmail.com www. jsscwkgl.org

**ದಿನಾಂಕ 25.07.2025**

## ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಪರಿಚಯಾತ್ಮಕ ಕಾರ್ಯಕ್ರಮ

ಕೊಳ್ಳೇಗಾಲ:25.07.2025 ಪದವಿಯಲ್ಲಿ ಪಡೆದುಕೊಂಡ ಜ್ಞಾನ ಜೀವನದ ದಾರಿದೀಪವಾಗಬಹುದು ಎಂದು ಪ್ರೊ.ಟಿ.ಪಿ.ರೇಣುಕಾಮೂರ್ತಿ, ಪ್ರಾದೇಶಿಕ ನಿರ್ದೇಶಕರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಸ್ನಾತಕೊತ್ತರ ಕೇಂದ್ರ, ಮೈಸೂರು ರವರು ತಿಳಿಸಿದರು.

ವಿದ್ಯಾರ್ಥಿ ಜೀವನದಲ್ಲಿ ಪದವಿ ಹಂತ ಪ್ರಮುಖವಾಗಿದ್ದು, ವೃಥಾ ಕಾಲಹರಣ, ಕೆಟ್ಟ ಅಭ್ಯಾಸದಲ್ಲಿ ತೊಡಗಿ ಭವಿಷ್ಯದಲ್ಲಿ ಪಶ್ಚಾತ್ತಾಪ ಪಡದಂತೆ ಎಚ್ಚರಿಸಿದರು. ಸಮಾಜದಲ್ಲಿ ಎತ್ತರಕ್ಕೆ ಬೆಳೆಯುವ ಗುರಿ ಹೊಂದಿ ನಿತ್ಯ ಹೆಚ್ಚು ಸಮಯ ಅಭ್ಯಾಸದ ಕಡೆಗೆ ಗಮನಹರಿಸುವಂತೆ ತಿಳಿಸಿದರು. ಉನ್ನತ ಶಿಕ್ಷಣದಲ್ಲಿ ಕಲಿಕೆಗೆ ಹೆಚ್ಚು ಪ್ರಾಧಾನ್ಯತೆಯಿದ್ದು, ವಿದ್ಯಾರ್ಥಿಗಳು ಸೃಜನಾತ್ಮಕತೆ, ಉತ್ಸಾಹ, ಉತ್ತಮ ವ್ಯಕ್ತಿತ್ವ ಬೆಳೆಸಿಕೊಂಡಲ್ಲಿ ಸಾಧನೆ ಸಾಧ್ಯವಿದ್ದು, ಬದಲಾವಣೆಯ ಪರ್ವದಲ್ಲಿ ಪ್ರತಿಯೊಬ್ಬರಿಗೂ ಪ್ರಪಂಚದ ಜ್ಞಾನ ಅನಿವಾರ್ಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ.ಹೆಚ್ ಎಸ್ ಕೊಂಗಳಪ್ಪರವರು 1983ರಲ್ಲಿ ಪೂಜ್ಯಶ್ರೀ ರಾಜೇಂದ್ರ ಮಹಾಸ್ವಾಮೀಜಿಯವರ ಆಶಯದಂತೆ ಕೊಳ್ಳೇಗಾಲದಲ್ಲಿ ನಮ್ಮ ಮಹಿಳಾ ಕಾಲೇಜು ಸ್ಥಾಪನೆಯಾಗಿ ಮಹಿಳೆಯರ ಆರ್ಥಿಕ ಹಾಗೂ ಸಾಮಾಜಿಕ, ಸದೃಢತೆಯ ಧ್ಯೇಯೋದ್ದೇಶದೊಂದಿಗೆ ಕಾರ್ಯ ನಿರ್ವಹಿಸುತ್ತಿದೆ ಎಂದು ಕಾಲೇಜಿನಲ್ಲಿರುವ ಸೌಲಭ್ಯಗಳನ್ನು ಬಳಸಿಕೊಂಡು ಸರ್ವಾಂಗೀಣ ಅಭಿವೃದ್ಧಿ ಹೊಂದಬೇಕೆಂದು ಸಲಹೆ ನೀಡಿದರು.

ಎಲ್ಲಾ ವಿಭಾಗಗಳ ಮುಖ್ಯಸ್ಥರು ತಮ್ಮ ವಿಭಾಗದ ಪರಿಚಯ ಮಾಡಿಕೊಟ್ಟರು ಕಾರ್ಯಕ್ರಮದಲ್ಲಿ ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀ ಹೆಚ್ ಎಂ ನಾಗಭೂಷಣ್ ಮತ್ತು ಐಕ್ಯೂಎಸಿ ಸಂಚಾಲಕರು ಮತ್ತು ಮುಖ್ಯಸ್ಥರು  ವಾಣಿಜ್ಯಶಾಸ್ತ್ರ ವಿಭಾಗರವರು ಉಪಸ್ಥಿತರಿದ್ದರು.

ಪ್ರೊ.ಟಿ.ಪಿ.ರೇಣುಕಾಮೂರ್ತಿ, ಪ್ರಾದೇಶಿಕ ನಿರ್ದೇಶಕರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಸ್ನಾತಕೊತ್ತರ ಕೇಂದ್ರ, ಮೈಸೂರು ಪರಿಚಯಾತ್ಮಕ ಕಾರ್ಯಕ್ರಮವನ್ನು ಉದ್ಘಾಟಿಸುತ್ತಿರುವುದು, ಚಿತ್ರದಲ್ಲಿ ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀ ಹೆಚ್ ಎಂ ನಾಗಭೂಷಣ್ , ಪ್ರಾಚಾರ್ಯರಾದ ಡಾ.ಹೆಚ್ ಎಸ್ ಕೊಂಗಳಪ್ಪರವರು ಹಾಗೂ ಐಕ್ಯೂಎಸಿ ಸಂಚಾಲಕರು ಮತ್ತು ಮುಖ್ಯಸ್ಥರು  ವಾಣಿಜ್ಯಶಾಸ್ತ್ರ ವಿಭಾಗ



ಪ್ರೊ.ಟಿ.ಪಿ.ರೇಣುಕಾಮೂರ್ತಿ, ಪ್ರಾದೇಶಿಕ ನಿರ್ದೇಶಕರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಸ್ನಾತಕೊತ್ತರ ಕೇಂದ್ರ, ಮೈಸೂರು ಉದ್ಘಾಟನಾ ಭಾಷಣ ಮಾಡುತ್ತಿರುವುದು. ಚಿತ್ರದಲ್ಲಿ ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀ ಹೆಚ್ ಎಂ ನಾಗಭೂಷಣ್ , ಪ್ರಾಚಾರ್ಯರಾದ ಡಾ.ಹೆಚ್ ಎಸ್ ಕೊಂಗಳಪ್ಪರವರು ಹಾಗೂ ಐಕ್ಯೂಎಸಿ ಸಂಚಾಲಕರು ಮತ್ತು ಮುಖ್ಯಸ್ಥರು ವಾಣಿಜ್ಯಶಾಸ್ತ್ರ ವಿಭಾಗ

